ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

**ಸಂಖ್ಯೆ: ಕವಿಪ್ರನಿನಿ/ಬಿ16/9457/2019-20** ದಿನಾಂಕ : 28 APR 2021

## ಸುತ್ತೋಲೆ

**ವಿಷಯ:** ಕೋವಿಡ್-19 ವೈರಾಣು ಹರಡುವಿಕೆಯನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ಕವಿಪ್ರನಿನಿಯ ಕಚೇರಿಗಳು ದಿನಾಂಕ: 27.04.2021 ರಿಂದ 12.05.2021 ರವರೆಗೆ ಕಾರ್ಯನಿರ್ವಹಿಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ: 26.04.2021.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 87 ಡಿಇವಿ 2021, ದಿನಾಂಕ: 27.04.2021.

*****

ಇತ್ತೀಚೆಗೆ ಕೋವಿಡ್-19 ವೈರಾಣು ಕರ್ನಾಟಕ ರಾಜ್ಯದಲ್ಲಿ ತೀವ್ರವಾಗಿ ಹರಡುತ್ತಿದ್ದು, ಇದನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ರಾಜ್ಯ ಸರ್ಕಾರವು ಹಲವಾರು ಕ್ರಮಗಳನ್ನು ಕೈಗೊಂಡು ದಿನಾಂಕ: 27.04.2021 ರ ರಾತ್ರಿಯಿಂದ ರಿಂದ 12.05.2021 ರ ಮುಂಜಾನೆವರೆಗೆ, 'ಲಾಕ್‌ಡೌನ್' ಘೋಷಿಸಿ ಉಲ್ಲೇಖ-1 ರ ಆದೇಶದಲ್ಲಿ ಮಾರ್ಗಸೂಚಿಗಳನ್ನು ನೀಡಿರುತ್ತದೆ ಹಾಗೂ ಅತ್ಯಗತ್ಯ ಸೇವೆ ಒದಗಿಸುತ್ತಿರುವ ಇಲಾಖೆಗಳ ಸಿಬ್ಬಂದಿಗಳ ಹಾಜರಾತಿ ಬಗ್ಗೆ ಉಲ್ಲೇಖ-2 ರ ಸುತ್ತೋಲೆಯನ್ನು ಹೊರಡಿಸಿರುತ್ತದೆ. ಆದ್ದರಿಂದ, ಸದರಿ ಆದೇಶ/ಸುತ್ತೋಲೆಗಳನ್ವಯ ಈ ಕೆಳಕಂಡ ಮಾರ್ಗಸೂಚಿಗಳನ್ನು ಪಾಲಿಸಲು ತಿಳಿಸಲಾಗಿದೆ:-

1. ದಿನಾಂಕ: 28.04.2021 ರಿಂದ 12.05.2021 ರವರೆಗೆ ರಾಜ್ಯದಾದ್ಯಂತ ನಿಗಮದ **ಎಲ್ಲಾ ಆಡಳಿತ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ಶೇ.50 ರಂತೆ ರೊಟೇಷನ್ ಆಧಾರದ ಮೇಲೆ ಕರ್ತವ್ಯಕ್ಕೆ ಹಾಜರಾಗತಕ್ಕದ್ದು.**

2. ಅದಾಗ್ಯೂ, ನಿರಂತರ ಹಾಗೂ ಅಡೆತಡೆ ಇಲ್ಲದ ವಿದ್ಯುತ್ ಪ್ರಸರಣ ಹಾಗೂ ನಿರ್ವಹಣೆಗೆ ಸಂಬಂಧಿಸಿದಂತೆ ಈ ಕೆಳಕಂಡ ಕಚೇರಿಗಳು ಎಂದಿನಂತೆ ಕಾರ್ಯನಿರ್ವಹಿಸತಕ್ಕದ್ದು. ಸಂಬಂಧಪಟ್ಟ ಕಚೇರಿಯ ಮುಖ್ಯಸ್ಥರು/ನೋಡಲ್ ಅಧಿಕಾರಿಯು ಅಧಿಕಾರಿ/ನೌಕರರಿಗೆ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲು ಕ್ರಮಕೈಗೊಳ್ಳುವುದು.

   (ಅ) ನಿಗಮದ ಎಲ್ಲಾ 400ಕೆವಿ/220ಕೆವಿ/110ಕೆವಿ/66ಕೆವಿ ಸ್ಥಾವರಗಳ ಪಾಳಿ ಹಾಗೂ ನಿರ್ವಹಣೆ.
   (ಆ) ಟಿ.ಎಲ್.ಐ ಮತ್ತು ಹಾಟ್‌ಲೈನ್ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರು.
   (ಇ) ಎಸ್.ಎಲ್.ಡಿ.ಸಿ ಯಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಂತ್ರಿಕ ವರ್ಗದ ಅಧಿಕಾರಿ/ನೌಕರರು.

3. ಎಲ್ಲಾ ನಿರ್ವಹಣಾ ಸಿಬ್ಬಂದಿಗಳು ಸುರಕ್ಷತಾ ಸಾಧನಗಳು, ಸಮವಸ್ತ್ರ ಮತ್ತು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಧರಿಸತಕ್ಕದ್ದು.

4. ಕೇಂದ್ರ ಕಚೇರಿಯ ಹಾಗೂ ಎಲ್ಲಾ ಆಡಳಿತ ಶಾಖೆಗೆ ಸಂಬಂಧಿಸಿದ ಅಧಿಕಾರಿ/ನೌಕರರು ಮೇಲಧಿಕಾರಿಗಳು ಕರೆದಾಗ ತಕ್ಷಣವೇ ಕರ್ತವ್ಯಕ್ಕೆ ಹಾಜರಾಗತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ. ಕೋವಿಡ್-19 ಕರ್ತವ್ಯಕ್ಕಾಗಿ ನಿಯೋಜಿಸಿದ್ದಲ್ಲಿ ತಪ್ಪದೇ ಹಾಜರಾಗಿ ಕರ್ತವ್ಯ ನಿರ್ವಹಿಸತಕ್ಕದ್ದು.

5. ಕಚೇರಿಯ ತುರ್ತು ಕಾರ್ಯಗಳಲ್ಲಿ ಯಾವುದೇ ಅಡೆತಡೆಯಾಗದಂತೆ ಸಂಬಂಧಿಸಿದ ಕಚೇರಿಯ ಮುಖ್ಯಸ್ಥರು ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.

6. ದೃಷ್ಟಿಹೀನ ಹಾಗೂ ಇತರೆ ಅಂಗವೈಕಲ್ಯ ಹೊಂದಿರುವ ಅಧಿಕಾರಿ/ನೌಕರರು ಮತ್ತು ಗರ್ಭಿಣಿ ಮಹಿಳಾ ನೌಕರರು ಕಚೇರಿಗೆ ಹಾಜರಾಗುವುದರಿಂದ ವಿನಾಯಿತಿ ನೀಡಲಾಗಿದೆ.

7. ಈ ಸುತ್ತೋಲೆಯು, ದಿನಾಂಕ: 12.05.2021 ರವರೆಗೆ ಅಸ್ತಿತ್ವದಲ್ಲಿರುತ್ತದೆ.

"ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ಇವರಿಂದ ಅನುಮೋದಿಸಲ್ಪಟ್ಟಿರುತ್ತದೆ"

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

https://kptcl.karnataka.gov.in for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.